ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಖಾಸಗಿ ಸಾರಿಗೆ ಬಸ್ಸುಗಳ ಸಂಚಾರ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

364 (334) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಖಾಸಗಿ ಸಾರಿಗೆ ಸಂಸ್ಥೆಯವರು ಕಾರ್ಯ ನಿರ್ವಹಿಸುತ್ತಿದ್ದಾರೆ;

(ಆ) ಖಾಸಗಿ ಸಾರಿಗೆ ಸಂಸ್ಥೆಯವರು ಹಬ್ಬದ ದಿನಗಳಂದು ಮತ್ತು ಸರ್ಕಾರಿ ರಜಾ ದಿನಗಳಂದು ಸಂಚರಿಸುವ ಬಸ್ಸುಗಳ ಟಿಕೇಟು ದರಗಳನ್ನು ಅತಿ ಹೆಚ್ಚು ಏರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಕಳೆದ 6 ತಿಂಗಳಿನಲ್ಲಿ ಈ ರೀತಿ ದರ ಏರಿಸಿರುವ ಎಷ್ಟು ಬಸ್ಸುಗಳ ಪರವಾನಿಗೆಯನ್ನು ರದ್ದುಗೊಳಿಸಲಾಗಿದೆ;

(ಈ) ಸರ್ಕಾರಿ ಬಸ್ಸುಗಳನ್ನು ಲೋಕಲ್ ಸಾರಿಗೆಯ ರೂಪದಲ್ಲಿ ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಬಳಸಲಾಗುತ್ತಿದೆ; ಎಷ್ಟು ಬಸ್ಸುಗಳನ್ನು ಬಳಸಲಾಗುತ್ತಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಮಾರ್ಗಗಳಲ್ಲಿ (Route) ಸರ್ಕಾರಿ ಬಸ್ಸುಗಳನ್ನು ಸಾರ್ವಜನಿಕ ಸಾರಿಗೆಯ ರೂಪದಲ್ಲಿ ಬಳಸಲಾಗುತ್ತಿದೆ; ಎಷ್ಟು ಬಸ್ಸುಗಳನ್ನು ಬಳಸಲಾಗುತ್ತಿದೆ; ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಬಸ್ಸುಗಳನ್ನು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?